ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
ಹನ್ನೆರಡನೇ ಅಧಿವೇಶನ
ಕಾರ್ಯಕಲಾಪಗಳ ಪಟ್ಟಿ
ಸೋಮವಾರ, ದಿನಾಂಕ 21ನೇ ನವೆಂಬರ್, 2016
(ಸಮಯ: ಬೆಳಗ್ಗೆ 11.00 ಗಂಟೆ)

------

1. ಸಂತಾಪ ಸೂಚನೆ

2. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:–

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿ / ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕದ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

3. ವರದಿಗಳನ್ನೊಪ್ಪಿಸುವುದು

1. **ಶ್ರೀ ಕಿಮ್ಮನೆ ರತ್ನಾಕರ್** (ಮಾನ್ಯ ವಿಧಾನಸಭಾ ಸದಸ್ಯರು ಹಾಗೂ ಜಂಟಿ ನಿಯಮಾವಳಿ ಸಮಿತಿಯ ಸದಸ್ಯರು) ಅವರು – ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಗಳ ನಿಯಮಾವಳಿಗಳ ತಿದ್ದುಪಡಿಗಳಿಗೆ ಸಂಬಂಧಿಸಿದ ಜಂಟಿ ನಿಯಮಾವಳಿ ಸಮಿತಿಯ ಮಧ್ಯಂತರ ವರದಿಯನ್ನೊಪ್ಪಿಸುವುದು.

2. **ಶ್ರೀ ಜೆ.ಆರ್. ಲೋಬೋ** (ಅಧ್ಯಕ್ಷರು, ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ) ಅವರು – 2016-17ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಐದನೇ ವರದಿಯನ್ನೊಪ್ಪಿಸುವುದು.

......2

4. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಒಂದನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಒಂದನೇ ಪಟ್ಟಿ

5. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಕೆ.ಎಸ್. ಪುಟ್ಟಣ್ಣಯ್ಯ** ಅವರು – ಪಾಂಡವಪುರ ತಾಲ್ಲೂಕು ಮೇಲುಕೋಟೆಯಲ್ಲಿ ಶ್ರೀರಾಮಾನುಜಾಚಾರ್ಯರ ಸಹಸ್ರಮಾನೋತ್ಸವ ಆಚರಣೆ ಮಾಡುತ್ತಿರುವುದರಿಂದ ಮೇಲುಕೋಟೆಯನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರ ಗಮನ ಸೆಳೆಯುವುದು.

2. **ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್** ಅವರು – ವಿಜಯಪುರ ಜಿಲ್ಲೆಯಲ್ಲಿ ಟೋಕರೆ, ಕೋಳಿ ಜನಾಂಗದವರಿಗೆ ಜಾತಿ ಪ್ರಮಾಣ ಪತ್ರ ನೀಡದಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3. **ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ** ಅವರು – ಉತ್ತರ ಕರ್ನಾಟಕದಲ್ಲಿ ಮಳೆ ಕೊರತೆಯಿಂದ ಈರುಳ್ಳಿ ಬೆಳೆಹಾಳಾಗಿದ್ದು, ಆವರ್ತ ನಿಧಿ ಮುಖಾಂತರ ಈರುಳ್ಳಿ ಬೆಳೆಗೆ ಎಕರೆವಾರು ಪರಿಹಾರ ನೀಡುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

4. **ಶ್ರೀ ಮಾನಪ್ಪ ಡಿ. ವಜ್ಜಲ್** ಅವರು – ದುಸ್ಥಿತಿಯಲ್ಲಿರುವ ನಾರಾಯಣಪುರ ಬಲದಂಡೆ ಕಾಲುವೆಯನ್ನು ಆಧುನೀಕರಣಗೊಳಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ (I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)